ಕರ್ನಾಟಕ ಸರ್ಕಾರ
ಸಹಕಾರ ಚುನಾವಣಾ ಪ್ರಾಧಿಕಾರ

ಸಂಖ್ಯೆ: ಸಚುಪ್ರಾ/ಚು.ಅ.ನೇ/03/2016

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027
**ದಿನಾಂಕ:18.12.2015.**

**ವಿಷಯ:** ಸಹಕಾರ ಸಂಘಗಳ ಅಧಿನಿಯಮ, 1959 ಮತ್ತು ನಿಯಮಗಳು 1960ರ ನಿಯಮ 2(ಐ-1) ಮತ್ತು 13ಬಿಬಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳ ನಿಯಮ2(ಜಿ-2)ರಂತೆ ದಿನಾಂಕ:01.01.2016ರಿಂದ 30.06.2016ರ ವರೆಗೆ ಪದಾವಧಿ ಮುಗಿಯಲಿರುವ ಜಿಲ್ಲೆ/ಪ್ರಾಂತ್ಯ/ರಾಜ್ಯ ಕಾರ್ಯವ್ಯಾಪ್ತಿ ಹೊಂದಿರುವ ಎಲ್ಲಾ ರೀತಿಯ ಪ್ರಾಥಮಿಕ ಸಹಕಾರ ಸಂಘಗಳ/ ಸಹಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಸಹಕಾರ ಚುನಾವಣಾ ಪ್ರಾಧಿಕಾರದ ಆದೇಶ ಸಂಖ್ಯೆ:ಸಚುಆ/ 16/2013-14 ದಿನಾಂಕ:03.07.2013 ಮತ್ತು ಅಧಿಸೂಚನೆ ಸಂಖ್ಯೆ: ಸಚುಪ್ರಾ/ಚುನಾವಣೆ/ಏಪ್ರಿಲ್-ಡಿಸೆಂಬರ್/02/2015 ದಿನಾಂಕ: 23.02.2015
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂ.ವ್ಯಾಶಾಇ/58/ಶಾಸನ/2014 ದಿನಾಂಕ 06.09.2014 ಮತ್ತು ಸಂಖ್ಯೆ: ಸಿಒ 226 ಸಿಎಲ್ಎಂ 2014 ದಿನಾಂಕ 06.06.2015
3. ಸರ್ಕಾರದ ಪತ್ರ ಸಂಖ್ಯೆ:ಸಿಒ 217 ಸಿಎಲ್ಎಂ 2015 ದಿನಾಂಕ 7.12.2015 ಮತ್ತು ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ:ಅರ್ಎಸ್ಆರ್/ಎಕ್ಸ್ಎಂಸಿ/ಚುನ.ನೇ./124/2015-16 ದಿನಾಂಕ:08.12.2015
4. ಸಹಕಾರ ಚುನಾವಣಾ ಪ್ರಾಧಿಕಾರದ ಸುತ್ತೋಲೆ ಸಂಖ್ಯೆ: ಸಚುಪ್ರಾ/ಮ.ಪಟ್ಟಿ/02/2015 ದಿನಾಂಕ:14.12.2015
5. ಸಹಕಾರ ಚುನಾವಣಾ ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಜೂನ್/01/2016 ದಿನಾಂಕ: 18.12.2015

★★★

<u>ಪ್ರಸ್ತಾವನೆ:-</u>

2011 ರ ಭಾರತದ ಸಂವಿಧಾನದ 97ನೇ ತಿದ್ದುಪಡಿಯಂತೆ 2012ರಲ್ಲಿ ಸಹಕಾರ ಸಂಘಗಳ ಕಾಯ್ದೆಗೆ ತಿದ್ದುಪಡಿ ತರಲಾಗಿರುತ್ತದೆ. ಅದರಂತೆ 2013ರಲ್ಲಿ ಚುನಾವಣಾ ಆಯೋಗವು ರಚನೆಯಾಗಿರುತ್ತದೆ. ಭಾರತದ ಸಂವಿಧಾನದ 97ನೇ ತಿದ್ದುಪಡಿ ಅನುಚ್ಛೇದ 243ZK ನಲ್ಲಿ ರಾಜ್ಯ ವಿಧಾನಮಂಡಳವು ರೂಪಿಸುವ ಕಾನೂನಿನಲ್ಲಿ ಯಾವುದೇ ಸಹಕಾರ ಸಂಘದ ಎಲ್ಲಾ ಚುನಾವಣೆಗಳನ್ನು ನಡೆಸುವ ಮತ್ತು ತತ್ಸಂಬಂಧ ಮತದಾರ ಪಟ್ಟಿ ತಯಾರಿಸುವ ಮೇಲುಸ್ತುವಾರಿ, ನಿರ್ದೇಶನ ಮತ್ತು ನಿಯಂತ್ರಣಗಳು ಅದಕ್ಕಾಗಿ ರಚಿಸಲ್ಪಟ್ಟ ಚುನಾವಣಾ ಪ್ರಾಧಿಕಾರದಲ್ಲಿ ನಿಹಿತವಾಗಿರತಕ್ಕದ್ದು ಎಂದು ಉಪಬಂಧಿಸಲಾಗಿದೆ.

ಸಹಕಾರ ಸಂಘ/ಸಹಕಾರಿಯ ಆಡಳಿತ ಮಂಡಲಿಗಳಿಗೆ ಚುನಾವಣೆಯನ್ನು ಸಹಕಾರ ಚುನಾವಣಾ ಆಯೋಗದ ಮುಖಾಂತರ ಮುಕ್ತ, ನ್ಯಾಯೋಚಿತ ಹಾಗೂ ಪಾರದರ್ಶಕತೆಯಿಂದ ನಡೆಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ಅಧಿನಿಯಮ, 2012 ರಂತೆ ಪ್ರಕರಣ 39ಎ ಗೆ ತಿದ್ದುಪಡಿಯನ್ನು (2013ರ ಕರ್ನಾಟಕ ಅದಿನಿಯಮ ಸಂಖ್ಯೆ 3) ತಂದಿರುವುದಲ್ಲದೇ, 2013ರ ಕರ್ನಾಟಕ ಅಧಿನಿಯಮ ಸಂಖ್ಯೆ:4 ರಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಅಧಿನಿಯಮ 2013 ರಂತೆ ಪ್ರಕರಣ 26ಕ್ಕೆ ತಿದ್ದುಪಡಿ ತಂದು ಪ್ರಕರಣ 26ಎ ನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದೆ.

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ರ ಪ್ರಕರಣ 39ಎ ಹಾಗೂ ಪ್ರಕರಣ 39ಎಎ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 26 ಮತ್ತು 26ಎ ರಂತೆ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳಿಗೆ/ಸಹಕಾರಿಗಳಿಗೆ ಚುನಾವಣೆಗಳನ್ನು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆಗಳನ್ನು ಸಹಕಾರ ಚುನಾವಣಾ ಪ್ರಾಧಿಕಾರದ ಅಧೀಕ್ಷಣೆಗೆ ಒಳಪಟ್ಟು ಅಧಿನಿಯಮ/ನಿಯಮಗಳು ಹಾಗೂ ಉಪವಿಧಿಗಳ ಕಾನೂನಿಗೆ ಅನುಗುಣವಾಗಿ ನಡೆಸತಕ್ಕದ್ದಾಗಿರುತ್ತದೆ. ಈ ಚುನಾವಣೆಗಳನ್ನು ಪ್ರಕರಣ 39-ಎ(2)ರಂತೆ ನಾಲ್ಕು ಹಂತಗಳಲ್ಲಿ ನಡೆಸತಕ್ಕದ್ದಾಗಿರುತ್ತದೆ. ಅದೇ ರೀತಿಯಲ್ಲಿ 39ಎ(2)(ಎ)ರಂತೆ ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ ಚುನಾವಣೆಗಳನ್ನು ನಡೆಸತಕ್ಕದ್ದಾಗಿರುತ್ತದೆ. ತದನಂತರ, ಉಲ್ಲೇಖ(2)ರ ಅಧಿಸೂಚನೆ ದಿನಾಂಕ: 06-09-2014 ರಲ್ಲಿ 39ಎ ಗೆ ತಿದ್ದುಪಡಿ ತಂದಿದ್ದು, ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಳಿಗಳ ಸಾಮಾನ್ಯ ಚುನಾವಣೆ ಹಾಗೂ ಪದಾಧಿಕಾರಿಗಳ ಚುನಾವಣೆಯನ್ನು ಸಹಕಾರ ಚುನಾವಣಾ ಪ್ರಾಧಿಕಾರದ ಅಧೀಕ್ಷಣೆಯಲ್ಲಿ ನಡೆಸತಕ್ಕದ್ದಾಗಿರುತ್ತದೆ.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2015ರ ನಿಯಮ-13ಡಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ನಿಯಮಗಳು 2015ರ ನಿಯಮ-5ಬಿ(3)ಗಳಂತೆ ಚುನಾವಣಾಧಿಕಾರಿಯು ಕೂಲಂಕುಷ ಪರಿಶೀಲನೆಯ ನಂತರ, ಆಡಳಿತ ಮಂಡಲಿಗಳ ಪದಾವಧಿಯು ಮುಕ್ತಾಯವಾಗುವ ದಿನಾಂಕಕ್ಕೆ ಕನಿಷ್ಠ 120 ದಿನಗಳ ಪೂರ್ವದಲ್ಲಿ ಈ ಕೆಳಕಂಡ ವಿವರಗಳನ್ನೊಳಗೊಂಡ, ಚುನಾವಣೆಗಳು ಸನ್ನಿಹಿತವಾಗಿರುವ ಎಲ್ಲಾ ರೀತಿಯ ಪ್ರಾಥಮಿಕ ಸಹಕಾರ ಸಂಘಗಳ/ ಸಹಕಾರಿಗಳ ಸಂಘಗಳವಾರು ಮತ್ತು ಕ್ರೋಢೀಕೃತ ನಮೂನೆ 13ಡಿ(1)ರಂತೆ ದೃಢೀಕೃತ ಮಾಹಿತಿಯನ್ನು ಉಲ್ಲೇಖ(4)ರ ಪ್ರಾಧಿಕಾರದ ಸುತ್ತೋಲೆಯಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಕಳುಹಿಸತಕ್ಕದ್ದಾಗಿದೆ.

1. ಸಹಕಾರ ಸಂಘದ /ಸಹಕಾರಿಯ ಹೆಸರು ಮತ್ತು ವಿಳಾಸ
2. ಆಡಳಿತ ಮಂಡಲಿಗೆ ಆಯ್ಕೆಯಾಗಬೇಕಾಗಿರುವ ಚುನಾಯಿತ ನಿರ್ದೇಶಕರ ಸಂಖ್ಯೆ.
3. ಆಡಳಿತ ಮಂಡಲಿ ಪದಾವಧಿಯು ಮುಕ್ತಾಯವಾಗುವ ದಿನಾಂಕ
4. ಚುನಾವಣೆಗಳನ್ನು ನಡೆಸಬಹುದಾದ ಸ್ಥಳ ಹಾಗೂ ಚುನಾವಣಾ ಪ್ರಾಧಿಕಾರಕ್ಕೆ ಅವಶ್ಯವಿರುವ ಇತರೆ ಮಾಹಿತಿಗಳು.

2016ನೇ ಸಾಲಿನಲ್ಲಿ ಜನವರಿ 01 ರಿಂದ ಜೂನ್ 2016ರ ವರೆಗೆ ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗಲಿರುವ ಸಹಕಾರ ಸಂಘಗಳ/ಸಹಕಾರಿಗಳ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳಿಗೆ/ಸಹಕಾರಿಗಳಿಗೆ ಚುನಾವಣೆ ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ನಡೆಸಲು ಮತ್ತು ನಿಯಮಾನುಸಾರ ಮತದಾರರ ಪಟ್ಟಿ ತಯಾರಿಸಲು ಚುನಾವಣಾ ಪ್ರಾಧಿಕಾರವು ಚುನಾವಣಾ ಪೂರ್ವ ಸಿದ್ಧತಾ ಕಾರ್ಯವನ್ನು 06 ತಿಂಗಳ ಪೂರ್ವದಲ್ಲಿ ಪ್ರಾರಂಭಿಸಬೇಕಾಗಿರುತ್ತದೆ. ಆದಕಾರಣ ಚುನಾವಣಾಧಿಕಾರಿಗಳು ಮೇಲಿನ ಕಂಡಿಕೆಯಲ್ಲಿ ವಿವರಿಸಿರುವ 13ಡಿ(1)ರ ಮಾಹಿತಿಯನ್ನು ಸಕಾಲಕ್ಕೆ ತಪ್ಪದೇ ಸಲ್ಲಿಸತಕ್ಕದ್ದಾಗಿರುತ್ತದೆ.

ಉಲ್ಲೇಖ(1)ರ ಆದೇಶ ದಿನಾಂಕ:03.07.2013ರಲ್ಲಿ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳಿಗೆ ಚುನಾವಣೆಯನ್ನು ಸಮರ್ಪಕವಾಗಿ ನಡೆಸಲು ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರುಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ ಮುಂದಿನ ಆದೇಶದವರೆಗೆ ನೇಮಿಸಲಾಗಿರುತ್ತದೆ. ಪ್ರಾಧಿಕಾರದ ದಿನಾಂಕ:23.02.2015ರ ಅಧಿಸೂಚನೆಯೂ ದಿನಾಂಕ:31.12.2015ರವರೆಗೆ ಚುನಾವಣೆಗಳು ಬಾಕಿ ಇದ್ದ ಎಲ್ಲಾ ರೀತಿಯ ಪ್ರಾಥಮಿಕ ಸಂಘಗಳು/ಸಹಕಾರಿಗಳಿಗೂ ಈ ಆದೇಶವು ಅನ್ವಯವಾಗುತ್ತದೆ ಎಂಬ ಅಂಶವನ್ನು ಸ್ಪಷ್ಟಪಡಿಸಲಾಗಿರುತ್ತದೆ.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2015ರ ನಿಯಮ 2(ಐ-1)ರಂತೆ ಚುನಾವಣಾಧಿಕಾರಿಯನ್ನು ಸಹಕಾರ ಸಂಘಗಳ ಚುನಾವಣಾ ಪ್ರಾಧಿಕಾರದಿಂದ ಸಂದರ್ಭಾನುಸಾರ ಜಿಲ್ಲಾ/ಪ್ರಾಂತ್ಯ/ರಾಜ್ಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ ಎಲ್ಲಾ ರೀತಿಯ ಪ್ರಾಥಮಿಕ ಸಂಘಗಳಿಗೆ ಚುನಾವಣೆ ನಡೆಸಲು ಚುನಾವಣಾಧಿಕಾರಿಯಾಗಿ ವ್ಯಾಪ್ತಿ ಪ್ರದೇಶದ ಸಹಕಾರ ಸಂಘಗಳ ಸಹಾಯಕ/ಉಪ/ಜಂಟಿ ನಿಬಂಧಕರನ್ನು ಹೊರತುಪಡಿಸಿ, ನೇಮಕಾತಿ ಮಾಡಲ್ಪಟ್ಟ ಅಧಿಕಾರಿ ಎಂಬುದಾಗಿ ಇರುತ್ತದೆ. ಅದೇ ರೀತಿಯಲ್ಲಿ ನಿಯಮ 13ಬಿಬಿ ರಂತೆ ಸಹಕಾರ ಸಂಘಗಳ ಚುನಾವಣಾ ಪ್ರಾಧಿಕಾರವು ಪ್ರತಿ ಜಿಲ್ಲೆ/ಪ್ರಾಂತ್ಯ/ರಾಜ್ಯಕ್ಕೆ ಸಂದರ್ಭಾನುಸಾರ ನಿರ್ದಿಷ್ಟ ಅವಧಿಗೆ ಚುನಾವಣಾಧಿಕಾರಿಯನ್ನು ನೇಮಕ ಮಾಡತಕ್ಕದ್ದು ಎಂದಿರುತ್ತದೆ. ನಿಯಮಗಳಿಗೆ 13ಇ(1)ರಲ್ಲಿ ಪ್ರಾತಿನಿಧಿಕ ಸಾಮಾನ್ಯ ನಿಕಾಯವನ್ನುಳ್ಳ ಸಹಕಾರ ಸಂಘದ ಸಂಬಂಧದಲ್ಲಿ ಪ್ರತಿನಿಧಿಗಳ ಪ್ರತಿ ಚುನಾವಣೆಗೆ ಅಥವಾ ಪ್ರತಿ ಸಹಕಾರ ಸಂಘದ ಆಡಳಿತ ಮಂಡಲಿಯ ಪ್ರತಿ ಸಾಮಾನ್ಯ ಚುನಾವಣೆಗೆ ಅಥವಾ ಪ್ರತಿ ಸಹಕಾರ ಸಂಘದ ಪದಾಧಿಕಾರಿಗಳ ಪ್ರತಿ ಚುನಾವಣೆಗೆ ಅಥವಾ ಪ್ರತಿ ಸಹಕಾರ ಸಂಘದ ಪ್ರತಿನಿಧಿಯ ಅಥವಾ ನಿರ್ದೇಶಕನ ಅಥವಾ ಪದಾಧಿಕಾರಿಯ ಪದದಲ್ಲಿ ಉಂಟಾಗುವ ಆಕಸ್ಮಿಕ ಖಾಲಿಸ್ಥಾನವನ್ನು ಭರ್ತಿ ಮಾಡಲು ನಡೆಸುವ ಚುನಾವಣೆಗೆ, [ಪ್ರೌಢ, ಸಂಯುಕ್ತ ಮತ್ತು ಅಗ್ರ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಸಹಕಾರ ಚುನಾವಣಾ ಪ್ರಾಧಿಕಾರವು ಮತ್ತು ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಚುನಾವಣಾಧಿಕಾರಿಯು ರಿಟರ್ನಿಂಗ್ ಅಧಿಕಾರಿ ಮತ್ತು ಅಗತ್ಯವಿರುವಂತೆ ಒಬ್ಬ ಅಥವಾ ಹೆಚ್ಚು ಮಂದಿ ಸಹಾಯಕ ರಿಟರ್ನಿಂಗ್ ಅಧಿಕಾರಿಗಳನ್ನು ನೇಮಿಸತಕ್ಕದ್ದು] ಎಂದಿರುತ್ತದೆ.

ಮೇಲಿನ ಕಂಡಿಕೆಗಳಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಅವಲೋಕಿಸಿದ ನಂತರ ಮತ್ತು ಸಹಕಾರ ಸಂಘಗಳ ನಿಯಮಗಳಲ್ಲಿ ದತ್ತವಾಗಿರುವ ಅಧಿಕಾರದನ್ವಯ ಉಲ್ಲೇಖ(3)ರಲ್ಲಿ ಸರ್ಕಾರ/ನಿಬಂಧಕರಿಂದ ಸ್ಪಷ್ಟೀಕರಿಸಲ್ಪಟ್ಟ ಅಧಿಕಾರಿಗಳನ್ನು ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳನ್ನಾಗಿ ಸದ್ಯಕ್ಕೆ 06 ತಿಂಗಳ ಅವಧಿಗೆ ನೇಮಕಾತಿ ಮಾಡುವುದು ಸೂಕ್ತವೆಂದು ಅಭಿಪ್ರಾಯಕ್ಕೆ ಬರಲಾಯಿತು.

ನಂತರ ಕರ್ನಾಟಕ ಸಹಕಾರ ಸಂಘಗಳ ತಿದ್ದುಪಡಿ ನಿಯಮಗಳು 2015ರ ನಿಯಮ 2(ಐ-1) ಮತ್ತು ನಿಯಮ 13ಬಿಬಿ ಹಾಗೂ ಸೌಹಾರ್ದ ಸಹಕಾರಿ ತಿದ್ದುಪಡಿ ನಿಯಮ 2015 ನಿಯಮ 2(ಜಿ-2)ಗಳಂತೆ ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳಾಗಿ ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳು/ಸಹಕಾರಿಗಳ ಚುನಾವಣೆಯನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**-:ಆದೇಶ:-**

**ಸಂಖ್ಯೆ: ಸಚುಪ್ರಾ/ಚು.ಅ.ನೇ/03/2016** **ದಿನಾಂಕ: 18.12.2015**

ಪ್ರಸ್ತಾವೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಹಕಾರ ಸಂಘಗಳ ನಿಯಮಗಳ ತಿದ್ದುಪಡಿ 2015 ರ ನಿಯಮ 2(ಐ-1) ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳ ತಿದ್ದುಪಡಿ 2015ರ ನಿಯಮ 2(ಜಿ-2) ಮತ್ತು ನಿಯಮ 13ಬಿಬಿ ರಂತೆ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಎನ್.ಸಿ. ಮುನಿಯಪ್ಪ, ಕರ್ನಾಟಕ ಚುನಾವಣಾ ಪ್ರಾಧಿಕಾರದ ಆಯುಕ್ತನಾದ ನಾನು ಸಹಕಾರ ಸಂಘಗಳಿಗೆ/ಸೌಹಾರ್ದ ಸಹಕಾರಿಗಳಿಗೆ ಚುನಾವಣೆಗಳನ್ನು ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನು ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳನ್ನಾಗಿ ದಿನಾಂಕ 01.01.2016 ರಿಂದ 30.06.2016ರವರೆಗೆ ನೇಮಕಾತಿ ಮಾಡಿ ಆದೇಶಿಸಿರುತ್ತೇನೆ.

--4

| ಕ್ರ. ಸಂ. | ಜಿಲ್ಲಾ / ಪ್ರಾಂತ್ಯ / ರಾಜ್ಯ ಚುನಾವಣಾಧಿಕಾರಿಯಾಗಿ ನೇಮಕಗೊಳಿಸಲ್ಪಟ್ಟ ಅಧಿಕಾರಿ | ಚುನಾವಣಾಧಿಕಾರಿಯ ವ್ಯಾಪ್ತಿಗೆ ಬರುವ ಸಹಕಾರ ಸಂಘಗಳು / ಸೌಹಾರ್ದ ಸಹಕಾರಿಗಳು |
|---|---|---|
| 1) | ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು (ಬೆಂಗಳೂರು ನಗರದ ಉಪನಿಬಂಧಕರುಗಳು ಸೇರಿದಂತೆ) | ಆಯಾ ಜಿಲ್ಲೆಯಲ್ಲಿರುವ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು/ಪಟ್ಟಣ ಬ್ಯಾಂಕುಗಳು/ ಸೌಹಾರ್ದ ಸಹಕಾರಿಗಳು / ಸೌಹಾರ್ದ ಸಹಕಾರಿ ಬ್ಯಾಂಕುಗಳು |
| 2) | ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು (ಬೆಂಗಳೂರು ನಗರ ಜಿಲ್ಲೆ ಹೊರತುಪಡಿಸಿ) | ತಾಲ್ಲೂಕು ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು, ಸೌಹಾರ್ದ ಸಹಕಾರಿಗಳು, ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 3) | ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ (ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ) | ಬೆಂಗಳೂರು ನಗರ ತಾಲ್ಲೂಕು ಮಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು, ಸೌಹಾರ್ದ ಸಹಕಾರಿಗಳು, ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 4) | ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), ಕೇಂದ್ರ ಕಛೇರಿ, ಬೆಂಗಳೂರು. (ಬೆಂಗಳೂರು ಮತ್ತು ಮೈಸೂರು ಪ್ರಾಂತ್ಯಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು<br>ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ರಾಜ್ಯಮಟ್ಟದವರೆಗಿನ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು |
| 5) | ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಬೆಳಗಾವಿ (ಬೆಳಗಾವಿ ಪ್ರಾಂತಕ್ಕೆ ಸಂಬಂಧಿಸಿದಂತೆ) ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ (ಕಲಬುರಗಿ ಪ್ರಾಂತಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಪಟ್ಟಣ ಸಹಕಾರ ಬ್ಯಾಂಕುಗಳು, ಸೌಹಾರ್ದ ಸಹಕಾರಿಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 6) | ಸಹಕಾರ ಸಂಘಗಳ ಜಂಟಿ ನಿಬಂಧಕರು (ಕಾನೂನು ಕೋಶ), ಕೇಂದ್ರ ಕಛೇರಿ, ಬೆಂಗಳೂರು. (ಬೆಂಗಳೂರು ಮತ್ತು ಮೈಸೂರು ಪ್ರಾಂತ್ಯಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಸೌಹಾರ್ದ ಸಹಕಾರಿಗಳು, ಸೌಹಾರ್ದ ಸಹಕಾರಿ ಬ್ಯಾಂಕುಗಳು |
| 7) | ಕೇಂದ್ರ ಕಛೇರಿಯ ಸಹಕಾರ ಸಂಘಗಳ ಅಪರ ನಿಬಂಧಕರು (ಫೆಡರಲ್ ಮತ್ತು ಅಪೆಕ್ಸ್ ಸಹಕಾರ ಸಂಸ್ಥೆಗಳನ್ನು ಹೊರತುಪಡಿಸಿ, ಉಳಿದಂತೆ ಅವರವರ ವ್ಯಾಪ್ತಿಗೆ ಸಂಬಂಧಿಸಿದ ಸಹಕಾರ ಸಂಘಗಳು) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಸಹಕಾರ ಸಂಘಗಳು<br>ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ರಾಜ್ಯಮಟ್ಟದವರೆಗಿನ ಕಾರ್ಯವ್ಯಾಪ್ತಿ ಹೊಂದಿರುವ ಸಹಕಾರ ಸಂಘಗಳು |

*ಮೇಲೆ ಪ್ರತ್ಯಾಯೋಜಿಸಲ್ಪಟ್ಟ ಅಧಿಕಾರಿಗಳ ವ್ಯಾಪ್ತಿಗೆ ಒಂದು ವೇಳೆ ಪ್ರತ್ಯಾಯೋಜಿಸಲ್ಪಟ್ಟಿರುವ ಸಹಕಾರ ಸಂಸ್ಥೆಗಳ ಚುನಾವಣಾ ವ್ಯಾಜ್ಯಗಳು ಇತ್ಯರ್ಥಕ್ಕೆ ಬಂದಲ್ಲಿ ಸದರಿ ವ್ಯಾಜ್ಯಗಳನ್ನು ಇತರೆ ಸೂಕ್ತ ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಎಂಬ ಸೂಚನೆಯೊಂದಿಗೆ ಸ್ಪಷ್ಟೀಕರಣ ನೀಡಿರುವಂತೆ ಕ್ರಮವಿಡತಕ್ಕದ್ದು.*

--5

ಸಹಕಾರ ಚುನಾವಣಾ ಪ್ರಾಧಿಕಾರ /ಚುನಾವಣಾಧಿಕಾರಿಯು ಕಡ್ಡಾಯವಾಗಿ ರಿಟರ್ನಿಂಗ್ ಅಧಿಕಾರಿಯನ್ನು ರ‍್ಯಾಂಡ್‌ಮೈಜೆಷನ್ (Randomization) ಮೂಲಕ ನೇಮಕ ಮಾಡತಕ್ಕದ್ದು. ಇದನ್ನು ಚುನಾವಣಾ ಪ್ರಾಧಿಕಾರದ ಗಮನಕ್ಕೆ ತಪ್ಪದೇ ತರಲು ಕ್ರಮ ವಹಿಸತಕ್ಕದ್ದು.

ಚುನಾವಣಾಧಿಕಾರಿಗಳು ಪ್ರಾಥಮಿಕ ಸಹಕಾರ ಸಂಘಗಳು / ಸಹಕಾರಿಗಳ ಮುಖ್ಯ ಕಾರ್ಯನಿರ್ವಾಹಕರು ಸಲ್ಲಿಸಿದ ಮತದಾರರ ಪಟ್ಟಿಯನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಪರಿಶೀಲಿಸಿ ಸಿದ್ದಪಡಿಸಲು ಹಾಗೂ ಮತ ನೀಡುವ ಹಕ್ಕುಳ್ಳ / ಸುಸ್ತಿದಾರರ ಹಾಗೂ ಸುಸ್ತಿಯಾಗುವವರ ಕರಡುಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ ಕನಿಷ್ಠ 45 ದಿನಗಳ ಮುಂಚಿತವಾಗಿ ಪ್ರಕಟಿಸಿ, ಆಕ್ಷೇಪಣೆ ಕರೆಯುವುದು, ಅಂತಿಮ ಮತದಾರರ ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ 15 ದಿನಗಳ ಪೂರ್ವದಲ್ಲಿ ಪ್ರಕಟಿಸತಕ್ಕದ್ದು. ಅವುಗಳ ಪ್ರತಿಯನ್ನು ಪ್ರಾಧಿಕಾರಕ್ಕೆ ಕಳುಹಿಸಿ ಕೊಡತಕ್ಕದ್ದು.

ಅಲ್ಲದೆ ಪ್ರತಿ ಸಹಕಾರ ಸಂಘದ / ಸಹಕಾರಿಯ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ ಹಾಗೂ ಮತದಾರರ ಹಕ್ಕನ್ನು ಹೊಂದಿರದ ಇತರ ಸದಸ್ಯರ ಕರಡು ಪಟ್ಟಿಗಳನ್ನು ಹಾಗೂ ಮತದಾರರ ಅಂತಿಮ ಪಟ್ಟಿ ಮತ್ತು ಚುನಾವಣಾ ವೇಳಾಪಟ್ಟಿಗಳನ್ನು ಸಂಬಂಧಪಟ್ಟ ಸಹಕಾರ ಸಂಘದ / ಸಹಕಾರಿಯ ಮತ್ತು ಅದರ ಶಾಖೆಗಳ ಸೂಚನಾಫಲಕಗಳನ್ನು, ಸಹಕಾರ ಇಲಾಖೆಯ ಸ್ಥಳೀಯ ಕಛೇರಿಯಲ್ಲಿ, ಸಹಕಾರ ಸಂಘದ ಜಾಲತಾಣದಲ್ಲಿ (ಇದ್ದಲ್ಲಿ) ಹಾಗೂ ಸಹಕಾರ ಸಂಘದ ಸದಸ್ಯರಿಗೆ ತಲುಪಲು ಅವಕಾಶವಿರುವಂತಹ ಇತರ ಸ್ಥಳಗಳಲ್ಲಿ ಪ್ರಕಟಿಸತಕ್ಕದ್ದು. ಅವುಗಳ ಪ್ರತಿಯನ್ನು ಪ್ರಾಧಿಕಾರಕ್ಕೆ ಕಳುಹಿಸಿ ಕೊಡತಕ್ಕದ್ದು.

ಚುನಾವಣಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಗೆ ಬರುವಂತಹ ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಯನ್ನು ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ಸುತ್ತೋಲೆ, ಅಧಿಸೂಚನೆ ಮತ್ತು ಮಾರ್ಗಸೂಚಿಗಳನ್ನು ಅನುಸರಿಸಿ ಚುನಾವಣೆಗಳನ್ನು ನಿಯಮಾನುಸಾರ, ಪಾರದರ್ಶಕವಾಗಿ ನಿಷ್ಪಕ್ಷಪಾತದಿಂದ ನಡೆಸಲು ಆದೇಶಿಸಿದೆ.

(ಎನ್.ಸಿ. ಮುನಿಯಪ್ಪ)
**ಆಯುಕ್ತರು,**
**ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು**

**ಇವರಿಗೆ:-**

1. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
2. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,
3. ಸಹಕಾರ ಸಂಘಗಳ ಜಂಟಿ ನಿಬಂಧಕರು(ಪಟ್ಟಣ ಬ್ಯಾಂಕುಗಳ ವಿಭಾಗ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
4. ಸಹಕಾರ ಸಂಘಗಳ ಜಂಟಿ ನಿಬಂಧಕರು(ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಬೆಳಗಾವಿ
6. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ
7. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು,

**ಪ್ರತಿಗಳು:-**

1. ಮಾನ್ಯ ಸರ್ಕಾರದ ಅಪರ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52
3. ಸಹಕಾರ ಸಂಘಗಳ ನಿಬಂಧಕರ ಕಛೇರಿಯ ಎಲ್ಲಾ ಅಪರ ನಿಬಂಧಕರು / ಜಂಟಿ ನಿಬಂಧಕರುಗಳಿಗೆ
4. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
5. ರಾಜ್ಯದ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ
6. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳು,